ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ರಾಜ್ಯದಲ್ಲಿ ಪಡಿತರ ಚೀಟಿಯ ವಿತರಣೆಯ ಕುರಿತು

ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1541 (1781) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮೂರು ವರ್ಷಗಳಿಂದ ಪಡಿತರ ಚೀಟಿ ಪಡೆಯಲು ಸಲ್ಲಿಕೆಯಾದ ಒಟ್ಟು ಅರ್ಜಿಗಳು ಎಷ್ಟು ; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಆ) ಸಲ್ಲಿಕೆಯಾಗಿರುವ ಅರ್ಜಿಗಳಲ್ಲಿ ಎಷ್ಟು ಅರ್ಜಿಗಳು ವಿಲೇವಾರಿಯಾಗಿವೆ; ವಿಲೇವಾರಿಯಾಗದೆ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; ಇದಕ್ಕೆ ಕಾರಣಗಳೇನು ;

(ಇ) ಬಾಕಿ ಉಳಿದಿರುವ ಪಡಿತರ ಚೀಟಿ ಅರ್ಜಿಗಳನ್ನು ವಿಲೇವಾರಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಈಗಾಗಲೇ ಪಡಿತರ ಚೀಟಿ ಪಡೆದಿರುವ ಫಲಾನುಭವಿಗಳಿಗೆ ಸರಿಯಾದ ರೀತಿಯಲ್ಲಿ ಪಡಿತರ ಚೀಟಿ ಸಿಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಫಲಾನುಭವಿಗಳಿಗೆ ನಿಗದಿತ ಅವಧಿಯೊಳಗೆ ಪಡಿತರ ಸೌಲಭ್ಯ ಸಿಗುವಂತಾಗಲು ಸರ್ಕಾರ ಕೈಗೊಂಡ ಕ್ರಮಗಳೇನು?